**Akashvani : Bangalore**
**Regional Bulletin In Kannada**
**20.12.2024 / 14.30 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

**೧. ೮೭ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಚಾಲನೆ**

**೨. ಪರಿಷತ್ ಸದಸ್ಯ ಸಿ.ಟಿ.ರವಿ ವಿರುದ್ಧದ ಪ್ರಕರಣ; ಬೆಂಗಳೂರಿನ ಜನಪ್ರತಿನಿಧಿಗಳ ಕೋರ್ಟ್‌ಗೆ ವರ್ಗಾವಣೆ**

**೩. ರಾಯಚೂರಿನ ಮಲಿಯಾಬಾದ್‌ನಲ್ಲಿ ರಾಷ್ಟ್ರಕೂಟರ ಅರಸ ಅಮೋಘವರ್ಷನ ಪ್ರಮುಖ ಶಿಲ ಶಾಸನ ಪತ್ತೆ**

**೪. ಭದ್ರಾಮೆಲ್ದಂಡೆ ಯೋಜನೆ ಕಾಮಗಾರಿ ನಿಗದಿತ ಸಮಯದೊಳಗೆ ಪೂರ್ಣಗೊಳಿಸುವಂತೆ ವಿಶ್ವೇಶ್ವರಯ್ಯ ಜಲ ನಿಗಮದ ನಿರ್ದೇಶಕರ ಸೂಚನೆ**

**<><*<><>*><>**

೮೭ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಚಾಲನೆ ನೀಡಿದರು. ಹೊಂಬಾಳೆ ಅರಳಿಸಿ ಕನ್ನಡ ನುಡಿ ಅರಳಲಿ ಎಂಬ ಆಶಯದೊಂದಿಗೆ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಗಿದೆ. ಸಮ್ಮೇಳನದಲ್ಲಿ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಮಂಡ್ಯ ಜನರ ಭಾಷಾಂಭಿಮಾನವನ್ನು ಶ್ಲಾಘಿಸಿದರು. ತನ್ನದೇ ಆದ ಭಾಷೆಗೆ ಇಲ್ಲಿನ ಜನರ ಕೊಡುಗೆ ಅಪಾರ ಎಂದು ಹೇಳಿದರು.

ಮೂರು ದಿನಗಳ ಕಾಲ ನಡೆಯಲಿರುವ ನುಡಿ ಜಾತ್ರೆಗೆ ಆದಿ ಚುಂಚನಗಿರಿ ಮಠದ ನಿರ್ಮಲಾನಂದನಾಥ ಸ್ವಾಮೀಜಿ ಸಾನಿಧ್ಯ ವಹಿಸಿದ್ದರು. ಸಮ್ಮೇಳನಾಧ್ಯಕ್ಷರಾದ ನಾಡೋಜ ಡಾ. ಗೊ.ರು.ಚನ್ನಬಸಪ್ಪ, ಹಿರಿಯ ಸಾಹಿತಿಗಳಾದ ಡಾ. ದೊಡ್ಡರಂಗೇಗೌಡ, ಜ್ಞಾನ ಪೀಠ ಪ್ರಶಸ್ತಿ ಪುರಸ್ಕೃತರಾದ ಡಾ ಚಂದ್ರ ಶೇಖರ ಕಂಬಾರ, ವೇದಿಕೆಯ ಮೇಲೆ ಉಪಸ್ಥಿತರಿದ್ದರು. ಇದಕ್ಕೂ ಮೊದಲು ಸಮ್ಮೇಳನಾಧ್ಯಕ್ಷರ ಮೆರವಣಿಗೆ ನಡೆಯಿತು. ಸಮ್ಮೇಳನಾಧ್ಯಕ್ಷರಾದ ಗೊ.ರು.ಚನ್ನಬಸಪ್ಪ ಅವರು ಕಲೆ ಮತ್ತು ಸಾಂಸ್ಕೃತಿಕ ತಂಡದೊಂದಿಗೆ ತೆರೆದ ವಾಹನದಲ್ಲಿ ಸಾಗಿದರು. ವೇದಿಕೆ ಬಳಿ ರಾಷ್ಟ್ರ ಧ್ವಜಕ್ಕೆ ಸಚಿವ ಎನ್.ಚಲುವರಾಯಸ್ವಾಮಿ, ರಾಜ್ಯ ಧ್ವಜಕ್ಕೆ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಡಾ.ಮಹೇಶ್ ಜೋಶಿ, ಕನ್ನಡ ಸಾಹಿತ್ಯ ಪರಿಷತ್ ಧ್ವಜಕ್ಕೆ ಸಂಚಾಲಕಿ ಮೀರಾ ಶಿವಲಿಂಗಯ್ಯ ಧ್ವಜಾರೋಹಣ ನೆರವೇರಿಸಿದರು. ಸಾಹಿತ್ಯ ಸಮ್ಮೇಳನಕ್ಕೆ ನಿರೀಕ್ಷೆಗೂ ಮೀರಿ ಜನ ಸಾಗರ ಹರಿದು ಬಂದಿತ್ತು.

**<><*<><>*><>**

ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ವಿರುದ್ಧ ಆಕ್ಷೇಪಾರ್ಹ ಪದ ಬಳಕೆ ವಿಚಾರ ಕುರಿತಂತೆ ಪರಿಷತ್ ಸದಸ್ಯ ಸಿಟಿ ರವಿ ವಿರುದ್ಧದ ಪ್ರಕರಣವನ್ನು ಬೆಂಗಳೂರಿನ ಜನಪ್ರತಿನಿಧಿಗಳ ಕೋರ್ಟ್‌ಗೆ ವರ್ಗಾಯಿಸಲಾಗಿದೆ. ೨೪ ಗಂಟೆಯೊಳಗೆ ಬೆಂಗಳೂರಿನ ಜನಪ್ರತಿನಿಧಿಗಳ ನ್ಯಾಯಾಲಯಕ್ಕೆ ಹಾಜರುಪಡಿಸುವಂತೆ ಬೆಳಗಾವಿಯ ಜೆಎಂಎಫ್ ಸಿ ನ್ಯಾಯಾಲಯದ ನ್ಯಾಯಾಧೀಶರಾದ ಸ್ಪರ್ಶ ಡಿ.ಸೋಜಾ ಸೂಚನೆ ನೀಡಿದ್ದಾರೆ. ಘನತೆ ಗೌರವದಿಂದ ಬೆಂಗಳೂರಿಗೆ ಕರೆದೊಯ್ಯುವಂತೆ ತಿಳಿಸಿದ್ದಾರೆ.

**<><*<><>*><>**

ವಿಧಾನಪರಿಷತ್ ಸದಸ್ಯ ಸಿ.ಟಿ. ರವಿ ಬಂಧನ ಕುರಿತು ಸರ್ಕಾರ ಹಸ್ತಕ್ಷೇಪ ಮಾಡಿಲ್ಲ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ಬೆಳಗಾವಿಯಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ವಿರುದ್ಧ, ಸಿ.ಟಿ. ರವಿ ಆಕ್ಷೇಪಾರ್ಹ ಪದಬಳಕೆ ಮಾಡಿರುವ ಬಗ್ಗೆ ದಾಖಲೆಗಳಿವೆ ಎಂದು ಹೇಳಿದ್ದಾರೆ. ಇದೇ ವೇಳೆ ಪರಿಷತ್ ಸಭಾಪತಿ ಅವರ ನಿರ್ಧಾರದ ಬಗ್ಗೆಯೂ ಅವರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

**<><*<><>*><>**

ಪರಿಷತ್‌ನಲ್ಲಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ವಿರುದ್ಧ ಸದಸ್ಯ ಸಿ.ಟಿ. ರವಿ ಆಕ್ಷೇಪಾರ್ಹ ಪದ ಬಳಸಿದ ಬಗ್ಗೆ ಯಾವುದೇ ದಾಖಲೆಗಳಿಲ್ಲ ಎಂದು ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಸ್ಪಷ್ಟಪಡಿಸಿದ್ದಾರೆ. ಹುಬ್ಬಳ್ಳಿಯಲ್ಲಿ ಮಾತನಾಡಿದ ಅವರು, ಉಭಯ ನಾಯಕರು ಈ ಕುರಿತಂತೆ ತಮಗೆ ದೂರು ನೀಡಿದ್ದಾರೆ. ಬಳಿಕ ಅವರು ಪೊಲೀಸರಿಗೂ ದೂರು ನೀಡಿದ್ದಾರೆ ಎಂದು ತಿಳಿಸಿದ್ದಾರೆ.

**<><*<><>*><>**

ಬೆಳಗಾವಿಯ ಸುವರ್ಣಸೌಧದಲ್ಲಿ ನಿನ್ನೆ ನಡೆದ ಕೆಲ ಘಟನೆಗಳನ್ನು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಖಂಡಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ತಿಳಿಸಿರುವ ಅವರು, ಗೌರವಾನ್ವಿತ ಸಚಿವರ ಬಗ್ಗೆ ಸಿ.ಟಿ. ರವಿ ಆಕ್ಷೇಪಾರ್ಹ ಪದ ಬಳಸಿದ್ದರೆ ಅದನ್ನು ಸಮರ್ಥಿಸುವುದಿಲ್ಲ. ಆದರೆ ಸಿ.ಟಿ. ರವಿ ಮೇಲೆ ಸುವರ್ಣಸೌಧದಲ್ಲಿ ಹಲ್ಲೆಯತ್ನ ನಡೆದಿರುವುದು ಖಂಡನೀಯ ಎಂದು ತಿಳಿಸಿದ್ದಾರೆ.ಸಿ.ಟಿ. ರವಿ ಮೇಲೆ ದಾಳಿ ನಡೆಸಲು ಯತ್ನಿಸಿದವರು ಸುವರ್ಣಸೌಧದ ಒಳಗೆ ಹೇಗೆ ಪ್ರವೇಶಿಸಿದರು ಎಂದು ಪ್ರಶ್ನಿಸಿದ್ದಾರೆ.

<><*<><>*><>

ವಿಧಾನಪರಿಷತ್ ಸದಸ್ಯ ಹಾಗೂ ಮಾಜಿ ಸಚಿವ ಸಿ.ಟಿ. ರವಿ ವಿರುದ್ಧ ಕಾಂಗ್ರೆಸ್ ಸರ್ಕಾರ ದ್ವೇಷದ ರಾಜಕಾರಣ ಮಾಡುತ್ತಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಆರೋಪಿಸಿದ್ದಾರೆ. ಬೆಳಗಾವಿ ವಿಮಾನ ನಿಲ್ದಾಣದಲ್ಲಿ ಮಾತನಾಡಿದ ಅವರು, ಸಿ.ಟಿ. ರವಿ ಬಂಧನ ವಿರೋಧಿಸಿ ರಾಜ್ಯ ವ್ಯಾಪಿ ಪ್ರತಿಭಟನೆ ನಡೆಸುವುದಾಗಿ ತಿಳಿಸಿದ್ದಾರೆ. ಮಹಿಳೆಯ ಘನತೆಗೆ ಧಕ್ಕೆಯಾಗಿರುವ ಆರೋಪ ಗಂಭೀರವಾದದ್ದು, ಇದರ ಸತ್ಯಾಸತ್ಯತೆಯ ಬಗ್ಗೆ ಸಂಪೂರ್ಣ ತನಿಖೆಯಾಗಬೇಕು. ಸಾಮಾಜಿಕ ಜಾಲತಾಣದಲ್ಲಿ ಹರಿದಾಡುತ್ತಿರುವ ವಿಡಿಯೋವನ್ನು ಎಫ್‌ಎಸ್‌ಎಲ್‌ಗೆ ಕಳುಹಿಸಿ ಸತ್ಯಾಸತ್ಯತೆ ಪರಿಶೀಲಿಸಬೇಕು ಎಂದು ಒತ್ತಾಯಿಸಿದ್ದಾರೆ.

<><*<><>*><>

ಪರಿಷತ್ ಸದಸ್ಯ ಸಿ.ಟಿ. ರವಿ ಬಂಧನ ಖಂಡಿಸಿ, ರಾಜ್ಯದ ವಿವಿಧೆಡೆ ಬಿಜೆಪಿ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು. ಚಿಕ್ಕಮಗಳೂರಿನ ಹನುಮಂತಪ್ಪ ವೃತ್ತದಲ್ಲಿ ಬಿ.ಜೆ.ಪಿ ಕಾರ್ಯಕರ್ತರು ಸಿ.ಟಿ ರವಿ ಬಿಡುಗಡೆಗೊಳಿಸುವಂತೆ ಆಗ್ರಹಿಸಿದರು. ಈ ಕುರಿತಂತೆ ಚಿಕ್ಕಮಗಳೂರು ಪ್ರತಿನಿಧಿ ಹೆಚ್ಚಿನ ಮಾಹಿತಿ ನೀಡಿದ್ದಾರೆ. ಮುನ್ನೆಚ್ಚರಿಕಾ ಕ್ರಮವಾಗಿ ಕೆಲ ಬಿ.ಜೆ.ಪಿ ನಾಯಕರನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ. ಚಿಕ್ಕಮಗಳೂರು ನಗರದಲ್ಲಿ ಪಶ್ಚಿಮ ವಲಯ ಡಿ.ಐ.ಜಿ.ಪಿ ಅಮಿತ್ ಸಿಂಗ್ ನೇತೃತ್ವದಲ್ಲಿ ಹೆಚ್ಚಿನ ಭದ್ರತೆ ಕೈಗೊಳ್ಳಲಾಗಿದೆ. ತುಮಕೂರು ಜಿಲ್ಲಾ ಬಿಜೆಪಿ ವತಿಯಿಂದ ಕಾರ್ಯಕರ್ತರು ಸಿ.ಟಿ. ರವಿ ಬಂಧನ ಖಂಡಿಸಿ ಪ್ರತಿಭಟನೆ ನಡೆಸಿದರು. ರಾಜ್ಯದಲ್ಲಿ ಶಾಂತಿ ಸುವ್ಯವಸ್ಥೆ ಕಾಪಾಡಲು ವಿಫಲವಾದ ಸರ್ಕಾರವನ್ನು ವಜಾಗೊಳಿಸುವಂತೆ ಒತ್ತಾಯಿಸಿದರು. ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಸಿ.ಟಿ.ರವಿ ಬಂಧನ ಖಂಡಿಸಿ ಬಿಜೆಪಿ ನಾಯಕರು ಪ್ರತಿಭಟನೆ ನಡೆಸಿದರು.

<><*<><>*><>

ತುಮಕೂರು ವಿಶ್ವವಿದ್ಯಾಲಯದ ಇತಿಹಾಸ ಮತ್ತು ಪುರಾತತ್ವ ಅಧ್ಯಯನ ವಿಭಾಗದ ಅಧ್ಯಕ್ಷ ಪ್ರೊ.ಎಂ.ಕೊಟ್ರೇಶ್ ಕ್ಷೇತ್ರ ಕಾರ್ಯ ಮಾಡುವ ಸಂದರ್ಭದಲ್ಲಿ ರಾಷ್ಟ್ರಕೂಟರ ಅರಸ ಅಮೋಘವರ್ಷನ ಪ್ರಮುಖ ಶಿಲಾ ಶಾಸನವೊಂದು ರಾಯಚೂರು ಜಿಲ್ಲೆಯ ಮಲಿಯಾಬಾದ್ ಪ್ರದೇಶದಲ್ಲಿ ಪತ್ತೆಯಾಗಿದೆ. ಆಕಾಶವಾಣಿಯೊಂದಿಗೆ ಮಾತನಾಡಿರುವ ಪುರಾತತ್ವ ಅಧ್ಯಯನ ಕೇಂದ್ರದ ಪ್ರೊ.ಎಂ.ಕೊಟ್ರೇಶ್ ಅವರು, ಈ ಶಿಲಾಶಾಸನ ಇಪ್ಪತ್ತು ಸಾಲುಗಳನ್ನು ಒಳಗೊಂಡಿದೆ. ಇದರಲ್ಲಿ ಬಲ್ಲಾಳೇಶ್ವರಪುರದ ಉಲ್ಲೇಖ ಬರುತ್ತದೆ. ಜತೆಗೆ ಪಲ್ಲವಾನ್ವಯ ಎಂಬ ವಿಷಯದ ಪ್ರಸ್ತಾಪವಿದ್ದು ತುಮಕೂರು ಜಿಲ್ಲೆಯ ಸಂಬಂಧವನ್ನು ತೋರಿಸುತ್ತದೆ ಎಂದು ತಿಳಿಸಿದ್ದಾರೆ.

<><*<><>*><>

ಎಚ್‌ಐವಿ ಸೋಂಕಿತರ ದೇಹದಲ್ಲಿ ರೋಗ ನಿರೋಧಕ ಶಕ್ತಿ ಕ್ರಮೇಣ ಕಡಿಮೆಯಾಗುವುದರಿಂದ ಇದನ್ನು ನಿಯಂತ್ರಿಸಲು ಸರ್ಕಾರಿ ಆಸ್ಪತ್ರೆಗಳಲ್ಲಿ ನೀಡುವ ಉಚಿತ ಚಿಕಿತ್ಸೆಯನ್ನು ಪಡೆದುಕೊಳ್ಳಬೇಕು ಎಂದು ಹಿರಿಯ ನ್ಯಾಯಾಧೀಶ ಅಮೋಲ್ ಹಿರಿಕುಡೆ ಹೇಳಿದ್ದಾರೆ. ಹಾವೇರಿ ಜಿಲ್ಲೆ ಬ್ಯಾಡಗಿ ತಾಲ್ಲೂಕಿನ ಕದರಮಂಡಲಗಿ ಪ್ರಾಥಮಿಕ ಅರೋಗ್ಯ ಕೇಂದ್ರದಲ್ಲಿ ವಿಶ್ವ ಏಡ್ಸ್ ದಿನಾಚರಣೆ ಅಂಗವಾಗಿ ಏರ್ಪಡಿಸಿದ್ದ ಕಾನೂನು ಸಾಕ್ಷರತಾ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

<><*<><>*><>

ಭದ್ರಾ ಮೇಲ್ದಂಡೆ ಯೋಜನೆ ಕಾಮಗಾರಿ ನಿಗದಿತ ಸಮಯದೊಳಗೆ ಪೂರ್ಣಗೊಳಿಸುವಂತೆ ಅಧಿಕಾರಿಗಳಿಗೆ ಮತ್ತು ಗುತ್ತಿಗೆದಾರರಿಗೆ ವಿಶೇಶ್ವರಯ್ಯ ಜಲನಿಗಮದ ಮುಖ್ಯ ನಿರ್ದೇಶಕ ಸಣ್ಣಚಿತಯ್ಯ ಚಿತ್ರದುರ್ಗದಲ್ಲಿ ಸೂಚಿಸಿದ್ದಾರೆ. ಗೋನೂರು ಗ್ರಾಮದ ಸಮೀಪ ನಿರ್ಮಾಣ ಹಂತದಲ್ಲಿರುವ ಆಕ್ವಡಕ್ಟ್ ಕಾಮಗಾರಿಯನ್ನು ಪರಿಶೀಲನೆ ನಡೆಸಿದ ಅವರು, ಚಿತ್ರದುರ್ಗದಿಂದ ಜಗಳೂರು ತಾಲೂಕಿಗೆ ನೀರು ಹರಿಸುವ ಕಾಮಗಾರಿಯನ್ನು ಮತ್ತು ವಿವಿಧ ಕೆರೆಗಳಿಗೆ ನೀರು ಹರಿಸುವ ಕಾಲುವೆ ಕಾಮಗಾರಿಗಳನ್ನು ಶೀಘ್ರವೇ ಪೂರ್ಣಗೊಳಿಸುವಂತೆ ನಿರ್ದೇಶನ ನೀಡಿದ್ದಾರೆ.

<><*<><>*><>

೧. ಗದಗ ಜಿಲ್ಲೆಯ ಹುಲಕೋಟಿ ಗ್ರಾಮದ ಕೃಷಿ ವಿಜ್ಞಾನ ಕೇಂದ್ರದ ಗ್ರಾಮೀಣ ಸ್ವಯಂ ಉದ್ಯೋಗ ತರಬೇತಿ ಸಂಸ್ಥೆಯಲ್ಲಿ ನಿರುದ್ಯೋಗಿ ಯುವಕ, ಯುವತಿಯರಿಗಾಗಿ ಹೈನುಗಾರಿಕೆ ಮತ್ತು ಎರೆಹುಳ ಗೊಬ್ಬರ ತಯಾರಿಕೆ ತರಬೇತಿ ಶಿಬಿರ ಜನವರಿ ೨ ರಂದು ಜರುಗಲಿದೆ.